## 16. ಕೋವಿಡ್: ಆಯುರ್ವೇದ ಚಿಕಿತ್ಸೆಗೆ ರಾಜ್ಯ ಸರ್ಕಾರ ಸಮ್ಮತಿ

ಕೋವಿಡ್–19 ರೋಗಿಗಳಿಗೆ ಪ್ರಾಯೋಗಿಕವಾಗಿ ಆಯುರ್ವೇದ ಚಿಕಿತ್ಸೆ ಆರಂಭಿಸುವುದಕ್ಕೆ ರಾಜ್ಯ ಸರ್ಕಾರ ಒಪ್ಪಿಗೆ ಸೂಚಿಸಿದೆ. ಹಿರಿಯ ಆಯುರ್ವೇದ ವೈದ್ಯ ಡಾ: ಗಿರಿಧರ ಕಜೆ ಅವರೊಂದಿಗೆ ಮುಖ್ಯಮಂತ್ರಿಯವರು ಚರ್ಚಿಸಿದ ಬಳಿಕ ಈ ನಿರ್ಧಾರ ಪ್ರಕಟಿಸಿದರು.

'ಆರಂಭದಲ್ಲಿ ಹತ್ತು ಮಂದಿ ರೋಗಿಗಳಿಗೆ ಕೋವಿಡ್ ಆಸ್ಪತ್ರೆಯಲ್ಲೇ ಆಯುರ್ವೇದ ಗುಳಿಗೆ ನೀಡಲಾಗುವುದು. ಅದರ ಫಲಿತಾಂಶ ನೋಡಿಕೊಂಡು ಸರ್ಕಾರ ಮುಂದಿನ ನಿರ್ಧಾರ ಕೈಗೊಳ್ಳಲಿದೆ' ಎಂದು ಗಿರಿಧರ ಕಜೆ ಸುದ್ದಿಗಾರರಿಗೆ ತಿಳಿಸಿದರು.

ಸರ್ಕಾರದಿಂದ ಅಧಿಕೃತ ಆದೇಶ ಬಂದ ತಕ್ಷಣ ಈ ಔಷಧ ಪ್ರಯೋಗ ಆರಂಭವಾಗಲಿದೆ. 'ನಾನು ಪ್ರಚಾರಕ್ಕಾಗಿ ಈ ಕೆಲಸ ಮಾಡಿಲ್ಲ. ರಾಜ್ಯ ಸರ್ಕಾರದ ಮೂಲಕ ಐಸಿಎಂಆರ್‌ಗೆ ಪ್ರಸ್ತಾವನೆ ಕಳುಹಿಸಲಾಗಿತ್ತು. ಎಲ್ಲವನ್ನೂ ಪರಿಶೀಲಿಸಿಯೇ ಈ ಒಪ್ಪಿಗೆ ಕೊಟ್ಟಿದ್ದಾರೆ. ಕೋವಿಡ್ ಗುಣಪಡಿಸುವ ಔಷಧ ಆಯುರ್ವೇದದಲ್ಲಿ ಇದೆ. ಆಯುರ್ವೇದ ಔಷಧದಿಂದ ರೋಗಿಗಳು ಗುಣಮುಖರಾಗುವುದು ಸಾಬೀತಾದರೆ ಮುಂದೆ ಉಚಿತವಾಗಿ ಔಷಧ ನೀಡಲು ಸಿದ್ಧ' ಎಂದರು.

ನಿರ್ದೇಶನ ನೀಡಲು ಸುಪ್ರೀಂ ನಕಾರ:– ಕೋವಿಡ್–19 ಚಿಕಿತ್ಸೆಗೆ ಪರ್ಯಾಯವಾಗಿ ಹೋಮಿಯೋಪಥಿ ಮತ್ತು ಯುನಾನಿ ಔಷಧ ಬಳಸುವ ಸಾಧ್ಯತೆ ಕುರಿತಂತೆ ಸಂಬಂಧಿಸಿದವರಿಗೆ ಸೂಚಿಸಬೇಕು ಎಂದು ಕೋರಿದ್ದ ಅರ್ಜಿಯನ್ನು ವಿಚಾರಣೆಗೆ ಪರಿಗಣಿಸಲು ಸುಪ್ರೀಂ ನಿರಾಕರಿಸಿದೆ.

ನ್ಯಾಯಮೂರ್ತಿ ಎನ್.ವಿ. ರಮಣ ನೇತೃತ್ವದ ಪೀಠದ ಎದುರು ಅರ್ಜಿದಾರರ ಪರ ವಾದಿಸಿದ ವಕೀಲರು, 'ಸದ್ಯ ಕೋವಿಡ್ ಚಿಕಿತ್ಸೆಗೆ ನಿರ್ದಿಷ್ಟ ಔಷಧ ಇಲ್ಲದ ಕಾರಣ ಯುನಾನಿ ಮತ್ತು ಹೋಮಿಯೋಪಥಿ ಔಷಧ ಬಳಕೆಯ ಸಾಧ್ಯತೆಗಳನ್ನು ಪರಿಶೀಲಿಸಬಹುದು ' ಎಂದಿದ್ದರು.

ಆದರೆ ಪೀಠವು 'ಕೊರೊನಾ ಎಂಬುದು ನೂತನ ವೈರಾಣು. ಈ ಕುರಿತು ನಾವು ಪ್ರಯೋಗ ಮಾಡಲಾಗದು. ಪರಿಣಿತರು ಔಷಧವನ್ನು ಕಂಡುಹಿಡಿಯಲಿ ಅದಕ್ಕಾಗಿ, ಕಾಯೋಣ ಎಂದು ಪ್ರತಿಕ್ರಿಯಿಸಿತು. ಡಾ. ಸಿ ಆರ್. ಶಿವರಾಂ ಎಂಬವರು ಸಲ್ಲಿಸಿದ್ದ ಅರ್ಜಿ ವಜಾಮಾಡಲಾಯಿತು.

ಆಧಾರ:ಪ್ರಜಾವಾಣಿ, ದಿನಾಂಕ:16.04.2020